ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿ.ಸಿ.ನಂ.238/2023

ಚಾಸಾ:4 ಫ್ರಾಸಾ:6

ದಿನಾಂಕಃ 17.01.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿದಾರರ ಹೆಸರು– ಸರ್ವಣ

ತಂದೆಯ ಹೆಸರು– ಜೈ ಶಂಕರ್

ವಯಸ್ಸು – 30 ವರ್ಷ

ಉದ್ಯೋಗ– ಆಟೋ ಚಾಲಕ

ವಾಸ– ಕೆಜಿಎಫ್

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

**1.** ಸಾಕ್ಷಿಗೆ ನಿಪಿ–**8** ಬೆಳ್ಳಿಯ ಕಾಲು ಚೈನುಗಳು ಬಿದ್ದು ಹೋದ ಸ್ಥಳದ ಪಂಚನಾಮೆಯನ್ನು ತೋರಿಸಿ ಅದರಲ್ಲಿರುವ ಸಹಿಯನ್ನು ಗುರುತಿಸಲು ಕೇಳಿದ ಮೇರೆಗೆ ಅವರು ತಮ್ಮ ಸಹಿಯನ್ನು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ಈಗ ನಿಪಿ–**8**(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲೀಸರು ಈಗ ಸುಮಾರು ಒಂದೂವರೆ ವರ್ಷದ ಹಿಂದೆ ಪೋಲೀಸ್ ಠಾಣೆಯಲ್ಲಿ ಪಡೆದುಕೊಂಡಿರುತ್ತಾರೆ ಮತ್ತು ನನಗೆ ನಿಪಿ–**8** ರಲ್ಲಿ ಬರೆದಿರುವ ವಿಚಾರಗಳು ಗೊತ್ತಿರುವುದಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಅದೇ ರೀತಿ ಪೋಲೀಸರು ನನ್ನನ್ನು ವಿಚಾರಣೆ ಮಾಡಿ ನನ್ನ ಹೇಳಿಕೆ ಪಡೆದುಕೊಂಡಿರುವುದಿಲ್ಲ.

(**ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಎಂದು ಹೇಳಿ ಸಾಕ್ಷಿಗೆ ಪಾಟೀ ಸವಾಲು ಮಾಡಲು ಮಾನ್ಯ ಎಪಿಪಿ ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

2. ದಿನಾಂಕ 12.10.2022 ರಂದು ಮಧ್ಯಾಹ್ನ 3.45 ರಿಂದ 4.30 ಗಂಟೆವರೆಗೆ ಪೋಲೀಸರು ನನ್ನ ಸಮಕ್ಷಮ ನಿಪಿ–8 ರಂತೆ ಪಂಚನಾಮೆಯನ್ನು ಮಾಡಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

3. ಅದೇ ರೀತಿ ದಿನಾಂಕ **11.07.2022** ರಂದು ಪೋಲೀಸರು ನನ್ನನ್ನು ವಿಚಾರಣೆ ಮಾಡಿ ಈಗ ನನಗೆ ಓದಿ ಹೇಳಿದ ಹಾಗೆ ನನ್ನ ಹೇಳಿಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಈಗ ನಿಪಿ–**12** ಎಂದು ಗುರುತಿಸಲಾಯಿತು. ನಿಪಿ–**8** ಮತ್ತು **12** ರಲ್ಲಿ

ಬರೆದಿರುವ ವಿಚಾರಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್.ಜೆ.ಬಿ. ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಮುಜಾಫರ್)
ಹಿರಿಯ ಸಿ.ಜೆ. ಮತ್ತು ಪ್ರಧಾನ ಜೆಎಂಎಫ್‌ಸಿ
ಕೆಜಿಎಫ್